# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **813 (977)** |
| ಸದಸ್ಯರ ಹೆಸರು | : | ಶ್ರೀ. ಡಾ॥ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 28.09.2020 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರಿ ಪ್ರೌಢಶಾಲೆಗಳಲ್ಲಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರ ಹುದ್ದೆಗಳು ಎಷ್ಟು (ಮಾಹಿತಿ ನೀಡುವುದು) | ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರು ಹುದ್ದೆಗಳು = 1023<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಚಾರ್ಯರ ಹುದ್ದೆಗಳ ಸಂಖ್ಯೆ:618 |
| ಆ. | ಸರ್ಕಾರಿ ಪ್ರೌಢಶಾಲೆಗಳಲ್ಲಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಪ್ರತಿ ವರ್ಷ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರ ಹುದೆಗಳನ್ನು ತುಂಬಲು ಸರ್ಕಾರಕ್ಕೆ ಇರುವ ತೊಂದರೆ ಏನು; (ಮಾಹಿತಿ ನೀಡುವುದು) | ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಮುಖ್ಯೋಪಾಧ್ಯಾಯರ ಹುದ್ದೆಗಳನ್ನು ನಿವೃತ್ತಿ, ನಿಧನ ಬಡ್ತಿ ಇನ್ನಿತರೆ ಕಾರಣಗಳಿಂದಾಗಿ ಉದ್ಭವಿಸುವ ಖಾಲಿ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಬೆಂಗಳೂರು ವಿಭಾಗದ ಒಟ್ಟು 236 ಸರ್ಕಾರಿ ಪ್ರೌಢಶಾಲೆಗಳ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಬಡ್ತಿ ನೀಡಿಸ್ಥಳ ನಿಯುಕ್ತಿಗೊಳಿಸಿದೆ.<br><br>ಮೈಸೂರು ವಿಭಾಗದ ಒಟ್ಟು424 ಸರ್ಕಾರಿ ಪ್ರೌಢಶಾಲೆಗಳ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಬಡ್ತಿ ನೀಡಲು ಕ್ರಮವಹಿಸಲಾಗಿದೆ.<br><br>**ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ**<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಯೋ ನಿವೃತ್ತಿ/ನಿಧನ/ ರಾಜಿನಾಮೆ ಇನ್ನೀತರೆ ಕಾರಣಗಳಿಂದ ದಿನಾಂಕ:31/08/2020ಕ್ಕೆ ಒಟ್ಟು 618 ಪ್ರಾಚಾರ್ಯರ ಹುದ್ದೆಗಳು ಖಾಲಿಯಿದ್ದು, ಖಾಲಿಯಿರುವ 618 ಪ್ರಾಚಾರ್ಯರ ಹುದ್ದೆಗಳ ಪೈಕಿ 305 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಮಂಡಳಿಗೆ ವಹಿಸಲಾಗಿದೆ. |
| ಇ. | ಬಹಳಷ್ಟು ದೀರ್ಘಕಾಲ ಈ ಹುದ್ದೆಗಳು ಖಾಲಿ ಇದ್ದಲ್ಲಿ, ಶೈಕ್ಷಣಿಕ ಪ್ರಗತಿ ಕುಂಠಿತವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ.<br><br>ಕಾಲಕಾಲಕ್ಕೆ ಅರ್ಹ ಪ್ರೌಢ ಶಾಲಾ ಶಿಕ್ಷಕರನ್ನು ನಿಯಮಾನುಸಾರ ಬಡ್ತಿ ನೇಮಕಾತಿ ಮೂಲಕ ತುಂಬಲಾಗುತ್ತಿದ್ದು ಹಾಗೂ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶೈಕ್ಷಣಿಕ ಪ್ರಗತಿಗೆ ಕುಂಠಿತವಾಗದಂತೆ ನೋಡಿಕೊಳ್ಳಲಾಗುತ್ತಿದೆ. |

| | | |
|---|---|---|
| | | **ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ**<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಯೋ ನಿವೃತ್ತಿ/ನಿಧನ/ ರಾಜಿನಾಮೆ ಇನ್ನಿತರೆ ಕಾರಣಗಳಿಂದ ಖಾಲಿಯಾಗುವ, ಪ್ರಾಚಾರ್ಯರ ಹುದ್ದೆಗಳಿಗೆ ಬಡ್ತಿ ಮೂಲಕ ಹಾಗೂ ಆಯಾ ಕಾಲೇಜಿನ ಹಿರಿಯ ಉಪನ್ಯಾಸಕರನ್ನು ಪ್ರಾಚಾರ್ಯರ ಹುದ್ದೆಗೆ ಪ್ರಭಾರದಲ್ಲಿರಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಕುಂಠಿತವಾಗದಂತೆ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಇಪಿ 148 ಎಸ್‌ಒಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು